**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :117 ಫ್ರಾ.ಸಾ. : 56**

ಸಾಕ್ಷಿಯ ಹೆಸರು : ಗಂಗಾಧರ್
ತಂದೆಯ ಹೆಸರು : ತಿಮ್ಮಾ
ವಯಸ್ಸು : 56 ವರ್ಷ
ಉದ್ಯೋಗ : ಕೂಲಿ.
ವಾಸ : ಬೆಂಗಳೂರು.

**ದಿನಾಂಕಃ 06-12-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಕಾನಗೋಡು ಗ್ರಾಮದಲ್ಲಿ ಹುಟ್ಟಿದಾಗಿನಿಂದ ವಾಸ ಇದ್ದೆ, 2005 ರಲ್ಲಿ ನಾನು ಬೆಂಗಳೂರಿಗೆ ಹೋಗಿ ವಾಸ್ತವ್ಯ ಇದ್ದೇನೆ. ಕಾನಗೋಡದಲ್ಲಿ ನನ್ನ ಸ್ವಂತ ಮನೆ ಇದೆ ಅಲ್ಲಿ ನನ್ನ ಕುಟುಂಬದವರು ಈಗಲೂ ವಾಸ ಇದ್ದಾರೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ನನಗೆ ಇದ್ದಾನೆ. ಆರೋಪಿ ಕಾನಗೋಡು ಗ್ರಾಮ ಪಂಚಾಯತಿಯ ಅಧ್ಯಕ್ಷ ಆಗಿದ್ದ. 2001-02 ರಲ್ಲಿ ಸರ್ಕಾರ ಸ್ವಚ್ಚ ಗ್ರಾಮ ಯೋಜನೆ ಅಡಿಯಲ್ಲಿ ನಮ್ಮ ಗ್ರಾಮಕ್ಕೆ ಶೌಚಾಲಯ ನಿರ್ಮಿಸಿಕೊಳ್ಳಲು ರೂ.20 ಲಕ್ಷ ಅನುದಾನ ನೀಡಿದ್ದರು ಎನ್ನುವದು ಗೊತ್ತಿಲ್ಲ. ಅದರಲ್ಲಿ 210 ಫಲಾನುಭವಿಗಳು ಆಯ್ಕೆ ಆಗಿದ್ದರು ಎನ್ನುವುದು ಗೊತ್ತಿಲ್ಲ. ಅದರಲ್ಲಿ 210 ಜನ ಫಲಾನುಭವಿ ಆಯ್ಕೆ ಆಗಿದ್ದ ವಿಚಾರ ನನಗೆ ಗೊತ್ತಿಲ್ಲ, ನನ್ನ ಹೆಸರು ಫಲಾನುಭವಿ ಪಟ್ಟಿಯಲ್ಲಿ ಇತ್ತು. ನನಗೆ ಪಂಚಾಯತಿಯಿಂದ ಶೌಚಾಲಯ ನಿರ್ಮಿಸಿಕೊಟ್ಟಿದ್ದಾರೆ. 2002-03 ನೇ ಸಾಲಿನಲ್ಲಿ ಅದನ್ನು ನಿರ್ಮಿಸಿರಬಹುದು. ಪೊಲೀಸನವರು ನನ್ನನ್ನು ಈ ಪ್ರಕರಣದಲ್ಲಿ ವಿಚಾರಣೆ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದಃ-**

2. ದಿನಾಂಕಃ 10.09.2005 ರಂದು ಕಾರವಾರದ ಲೋಕಾಯುಕ್ತ ಆರಕ್ಷಕ ನಿರೀಕ್ಷಕರ ಮುಂದೆ 13 ವರ್ಷದ ಹಿಂದೆ ನಾವು ಸ್ವಂತ ಖರ್ಚಿನಲ್ಲಿ ನಮ್ಮ ಮನೆಯ ಜನರ

ಉಪಯೋಗಕ್ಕಾಗಿ ಕಟ್ಟಿಕೊಂಡು ಉಪಯೋಗಿಸುತ್ತಿದ್ದೇವೆ ಹಾಗೂ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ಶೌಚಾಲಯ ಕಟ್ಟಿಕೊಳ್ಳಲು ಅನುದಾನ ಹಣ ರೂ.3000/- ಅನ್ನು ಕೊಟ್ಟಿರುವುದಿಲ್ಲ ಹಾಗೂ ಶೌಚಾಲಯವನ್ನು ಸಹ ಕಟ್ಟಿಕೊಟ್ಟಿರುವುದಿಲ್ಲ ಎಂದು ಹೇಳಿಕೆ ನೀಡಿರುವುದಿಲ್ಲ. ಸದರಿ ಹೇಳಿಕೆಯನ್ನು ನಿಪಿ-86 ಎಂದು ಗುರುತಿಸಲಾಯಿತು. ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದಃ-**

ಏನೂ ಇಲ್ಲ ಎಂದು ಹೇಳಿದ್ದಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ